# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 252 (341)
2. ಸದಸ್ಯರ ಹೆಸರು : ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 12.12.2018
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಯಚೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆ ಮತ್ತು ತಾಲ್ಲೂಕಿನಲ್ಲಿ ರಾಯಚೂರು ಕೈಗಾರಿಕಾ ಪ್ರದೇಶವನ್ನು 155-88 ಎಕರೆ ವಿಸ್ತೀರ್ಣದಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಅಭಿವೃದ್ಧಿಪಡಿಸಲಾಗಿದೆ.<br>ಈ ಪೈಕಿ 25-60 ಎಕರೆ ಜಮೀನನ್ನು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ ನಿ.ರವರಿಗೆ ಹಂಚಿಕೆ ಮಾಡಲಾಗಿದೆ. ಸದರಿ ಜಮೀನಿನಲ್ಲಿ ಕೆ.ಎಸ್.ಎಸ್.ಐ.ಡಿ.ಸಿ.ರವರು ಶೆಡ್‌ಗಳನ್ನು ನಿರ್ಮಿಸಿ ಹಲವಾರು ಘಟಕಗಳಿಗೆ ಹಂಚಿಕೆ ಮಾಡಿದ್ದು, ಎಲ್ಲಾ ಘಟಕಗಳು ಚಾಲನೆಯಲ್ಲಿರುತ್ತದೆ. ಉಳಿದ ವಿಸ್ತೀರ್ಣದಲ್ಲಿ ಕೆ.ಐ.ಎ.ಡಿ.ಬಿ ವತಿಯಿಂದ ಕೈಗಾರಿಕಾ ಪ್ರದೇಶವನ್ನು ನಿರ್ಮಾಣ ಮಾಡಿ ಮಧ್ಯಮ ಕೈಗಾರಿಕಾ ಘಟಕಗಳಿಗೆ ಹಂಚಿಕೆ ಮಾಡಲಾಗಿದೆ.<br>ರಾಯಚೂರು ಬೆಳವಣಿಗೆ ಕೇಂದ್ರದಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ 1745-00 ಎಕರೆ ಪ್ರದೇಶದಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದೆ. ಇದರಲ್ಲಿ ಒಟ್ಟು 180 ಕೈಗಾರಿಕಾ ಘಟಕಗಳಿದ್ದು, ಈ ಪೈಕಿ 128 ಘಟಕಗಳು ಮಧ್ಯಮ ಮತ್ತು ಬೃಹತ್ ಕೈಗಾರಿಕೆಗಳಿಗೆ ಹಂಚಿಕೆ ಮಾಡಲಾಗಿದೆ. ಉಳಿದ 52 ನಿವೇಶನಗಳನ್ನು ಸಣ್ಣ ಕೈಗಾರಿಕೆಗಳಿಗೆ ಹಂಚಿಕೆ ಮಾಡಲಾಗಿದೆ. |
| ಆ. | ರಾಯಚೂರು ನಗರದಲ್ಲೂ ಆಟೋ ನಗರ ನಿರ್ಮಾಣ ಮಾಡಲು ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ; ಹಾಗಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು? | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಸಿಐ 146 ಐಎಪಿ 2018

(ಕೆ.ಜೆ. ಜಾರ್ಜ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು